ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಶುಕ್ರವಾರ, ದಿನಾಂಕ 19ನೇ ಜುಲೈ, 2019

ಪಿ.ಎಂ.ಎ.ವೈ ಯೋಜನೆಯಡಿ ಮನೆಗಳ ನಿರ್ಮಾಣದ ಗುರಿಯ ಬಗ್ಗೆ

ಶ್ರೀ ಪಿ. ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು):-

404 (595) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2014-15 ರಿಂದ 2018-19 ಸಾಲಿನವರೆಗೆ ಪಿ.ಎಂ.ಎ.ವೈ ಯೋಜನೆಯಡಿಯಲ್ಲಿ ಎಷ್ಟು ಸಂಖ್ಯೆಯ ಮನೆಗಳನ್ನು ಸ್ಲಂಬೋರ್ಡ್ ಮತ್ತು ರಾಜೀವ್ ಗಾಂಧಿ ವಸತಿ ನಿಗಮದಿಂದ ರಚಿಸಲಾಗಿದೆ ; ಇದರಲ್ಲಿ ಕೇಂದ್ರದ ಪಾಲು, ರಾಜ್ಯದ ಪಾಲು ಹಾಗೂ ಫಲಾನುಭವಿಗಳ ಪಾಲುಗಳ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು ;

(ಆ) 2008-09 ರಿಂದ 2014-15ನೇ ಸಾಲಿನವರೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದಡಿಯಲ್ಲಿ ಕೈಗೊಂಡ ವಸತಿ ಯೋಜನೆಗಳಿಗೆ ಸಂಬಂಧಿಸಿದಂತೆ ರಾಜೀವ್‌ಗಾಂಧಿ ವಸತಿ ನಿಗಮದಿಂದ ನಿರ್ಮಿಸಿರುವ ಮನೆಗಳ ಸಂಖ್ಯೆ ಎಷ್ಟು ; ಸ್ಲಂಬೋರ್ಡ್ ವತಿಯಿಂದ ನಿರ್ಮಿಸಿರುವ ಮನೆಗಳೆಷ್ಟು ; ಎಲ್ಲಾ ಯೋಜನೆಗಳಿಗೆ ಕೇಂದ್ರದ ಪಾಲು, ರಾಜ್ಯದ ಪಾಲು ಹಾಗೂ ಫಲಾನುಭವಿಗಳ ಪಾಲುಗಳ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು ;

(ಇ) ಬೆಂಗಳೂರು ನಗರದಲ್ಲಿ ಬಡವರಿಗೆ ಮನೆಗಳನ್ನು ನಿರ್ಮಿಸುವ ಯೋಜನೆ (ಕೊಳಗೇರಿ ಇಲಾಖೆ ಹೊರತುಪಡಿಸಿ) ಇದೆಯೇ ; ಇದ್ದಲ್ಲಿ, ಇಲ್ಲಿಯವರೆಗೆ ತೆಗೆದುಕೊಂಡ ಕ್ರಮದ ಬಗ್ಗೆ ಮಾಹಿತಿ ನೀಡುವುದು ?